# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ಸಹಾಯಕ ಕಾರ್ಯಪಾಲಕ ಅಭಿಯಂತರರು ವಾರ್ಡ್ ಸಂಖ್ಯೆ: 89– ಜೋಗುಪಾಳ್ಯ ವಾರ್ಡಿನ ದಿನಾಂಕ: 13.05.2022 ರಂದು ನಡೆದ ಸಭೆಯ ನಡವಳಿಗಳು

ಮಾನ್ಯ ಆಯುಕ್ತರು ಬಿಬಿಎಂಪಿ ರವರ ಕಛೇರಿ ಆದೇಶದ ಸಂಖ್ಯೆ: **ಬಿ12(5)ಪಿಆರ್/35/2020–21/21–09–2020** ರ ಆದೇಶದಂತೆ ದಿನಾಂಕ: 13.05.2022 ರಂದು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ **ಜೋಗುಪಾಳ್ಯ ವಾರ್ಡ್ ಸಂಖ್ಯೆ–89** ಸಭೆ ಕೆನೋಪಿ ಹೋಟೆಲ್ ಪಿ ಯು ಕಟ್ಟಡ 2ನೇ ಮಹಡಿ ಎಂ.ಜಿ ರಸ್ತೆ, ಬೆಂಗಳೂರು – ರಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡವಳಿಗಗಳು.

ಮಾನ್ಯ ಶ್ರೀ.ಎನ್.ಎ.ಹ್ಯಾರಿಸ್ ಶಾಸಕರು ಶಾಂತಿನಗರ ವಿಧಾನ ಸಭಾ ಕ್ಷೇತ್ರ ರವರ ಅಧ್ಯಕ್ಷತೆಯಲ್ಲಿ ವಾರ್ಡ್ ಸಮಿತಿ ಸಭೆಯು ದಿನಾಂಕ:13.05.2022ರಂದು ನಡೆಯಿತು.

### ಸಭೆಗೆ ಹಾಜರಿದ್ದವರ ವಿವರಗಳು

1) ಮಾನ್ಯ ಶ್ರೀ.ಎನ್.ಎ.ಹ್ಯಾರಿಸ್ ಶಾಸಕರು ಶಾಂತಿನಗರ ವಿಧಾನ ಸಭಾ ಕ್ಷೇತ್ರ, ಅಧ್ಯಕ್ಷರು.
2) ಶ್ರೀ.ಬಿ ಮಹೇಶ್ ಕುಮಾರ್, ನೋಡಲ್ ಅಧಿಕಾರಿ,ಸಹಾಯಕ ನಿಯಂತ್ರಕರು ಹಣಕಾಸು (ಪೂರ್ವ)
3) ಶ್ರೀ. ಮೂರ್ತಿ, ವಾರ್ಡ್ ಸಮಿತಿಯ ಕಾರ್ಯದರ್ಶೀ, ಸಹಾಯಕ ಅಭಿಯಂತರರು ಹಾಗೂ ಬಿಬಿಎಂಪಿ ಇತರ ವಿಭಾಗಗಳ ಅಂದರೆ, ಅರಣ್ಯ ಆರೋಗ್ಯ, ಕಾಮಗಾರಿ, ಘನತಾಜ್ಯ ವಿಭಾಗ, ಅಧಿಕಾರಿಗಳು, ಬೆಸ್ಕಾಂ ಮತ್ತು BWSSB ಅಧಿಕಾರಿಗಳು ಹಾಜರಿದ್ದರು.
4) ವಾರ್ಡ್ ಸಮಿತಿ ಸದಸ್ಯರಾದ, ಶ್ರೀ ರಮೇಶ್ ರೆಡ್ಡಿ, ಶ್ರೀಮತಿ ಆಶಾ ಆಲ್ವಿನ್, ಶ್ರೀಮತಿ ವಿಜಯಲಕ್ಷ್ಮೀ, ಶ್ರೀ ಶ್ರೀನಿವಾಸ ನಾಯ್ಡು ರವರು ಸಭೆಗೆ ಹಾಜರಿದ್ದರು,

ಸಭೆಯನ್ನು ಪ್ರಾರಂಭಿಸುತ್ತಾ ಮೊದಲನೆಯದಾಗಿ ನೋಡಲ್ ಅಧಿಕಾರಿಯವರು ಸಭೆಗೆ ಅಧ್ಯಕ್ಷತೆಯನ್ನು ವಹಿಸಿದ್ದ ಮಾನ್ಯ ಶಾಸಕರು ಮತ್ತು ಹಾಜರಿದ್ದ ಅಧಿಕಾರಿಗಳನ್ನು ಮತ್ತು ಅಹ್ವಾನಿತರಾಗಿದ್ದ ಸ್ಥಳೀಯರು ನಾಗರೀಕರಿಗೆ ಸ್ವಾಗತವನ್ನು ಕೋರಿ ಸಭೆಯನ್ನು ಪ್ರಾರಂಭಿಸಲಾಯಿತು.

ವಾರ್ಡ್ ಸಮಿತಿ ಸಭೆಯಲ್ಲಿ ನೀಡಿರುವ ಈ ಕೆಳಕಂಡ ವಾರ್ಡಿನ ಸಮಸ್ಯೆಗಳ ಬಗ್ಗೆ ಚರ್ಚಿಸಲಾಯಿತು.

ವಾರ್ಡ್ ಸಮಿತಿ ಸದಸ್ಯರಾದ ಶ್ರೀ ಶ್ರೀನಿವಾಸ್ ನಾಯ್ಡು ರವರು ಈ ಕೆಳಕಂಡಂತೆ ವಾರ್ಡಿನ ಸಮಸ್ಯೆಗಳ ಬಗ್ಗೆ ಲಿಖಿತ ರೂಪದಲ್ಲಿ ಪತ್ರವನ್ನು ಕೊಟ್ಟಿರುತ್ತಾರೆ.

1. ಬೆಳಗಿನ ಜಾವ ಮನೆ ಮನೆಯಿಂದ ಸಂಗ್ರಹಿಸುವ ಕಸವನ್ನು ಕಸ ತುಂಬಿರುವಂತಹ ಒಂದು ಆಟೋ ಡ್ರೈವರ್ ಮತ್ತು ಕ್ಲೀನರ್ ಮುಖ್ಯ ಚಾನಲ್‌ರಸ್ತೆಯಲ್ಲಿರುವ ಮೋರಿಗೆ ಕಸವನ್ನು ಎಸೆಯುತ್ತಿದ್ದಾರೆ ಇದು ಅಲ್ಲಿ ಸುತ್ತಮುತ್ತಲಿನ ವಾಸಿಸುವ ನಾಗರಿಕರು ದೂರನ್ನು ನೀಡುತ್ತಾ ಈ ಕಸದ ದುರ್ವಾಸನೆಯಿಂದ ವಾಸಿಸಲು ಸಾಧ್ಯವಿಲ್ಲವೆಂದು ಹೇಳಿರುತ್ತಾರೆ. ಈ ದೂರಿನ ಬಗ್ಗೆ ಕೂಡಲೆ ಕಿರಿಯ ಆರೋಗ್ಯ ಪರಿವೀಕ್ಷಕರು.(JHI) ಕ್ರಮವನ್ನು ತೆಗೆದುಕೊಂಡು ವರದಿ ನೀಡಬೇಕೆಂದು ಸೂಚಿಸಲಾಗಿದೆ.

2. ವಾರ್ಡಿನ ಮುಖ್ಯ ಚಾನಲ್ ರಸ್ತೆಗೆ ತಾರ್‌ಹಾಕಿರುವ ಪ್ರಸ್ತುತ ಅಲ್ಲಿ ಉಳಿದಿರುವಂತಹ ಅವಷೇಶಗಳನ್ನು ಕೂಡಲು ತೆರವುಗೊಳಿಸುವುದು ಮತ್ತು ಚಾನಲ್‌ಗೆ(ಮೋರಿಗೆ) ಕಟ್ಟಿರುವ ಬಿರುಕುಬಿಟ್ಟಿರುವ ಗೋಡೆಗಳನ್ನು ದುರಸ್ಥಿಗೊಳಿಸುವುದು.
3. ನಾಗರಿಕರು ಬೇರೆ ಪ್ರದೇಶದಿಂದ ಬಂದು ವಾರ್ಡಿನಲ್ಲಿ ತಮ್ಮ ವಾಹನಗಳನ್ನು ನಿಲ್ಲಿಸಿರುತ್ತಾರೆ(Parking), ಇದರಿಂದ ಇಲ್ಲಿ ವಾಸಿಸುವ ನಾಗರಿಕರಿಗೆ ಕೀರಿ ಕೀರಿ ಮಾಡಿರುತ್ತಾರೆ. ಕೂಡಲೆ ಟ್ರಾಫಿಕ್ ಅರಕ್ಷಕರು ವಾಹನ ನಿಲ್ದಾಣವಿಲ್ಲದ ಜಾಗದಲ್ಲಿ (No Parking) ಬೋರ್ಡನ್ನು ಅಳವಡಿಸುವುದು.
4. ವಾರ್ಡಿನ ಮುಖ್ಯ ಪ್ರದೇಶಗಳಲ್ಲಿ ಸಿಸಿಟಿವಿ (CCTV) ಗಳನ್ನು ಅಳವಡಿಸುವುದು. ಸಹಾಯಕ ಕಾರ್ಯಪಾಲಕ ಅಭಿಯಂತರರು ಕ್ರಮ ವಹಿಸುವುದು.
5. ವಾರ್ಡಿನಲ್ಲಿ LED ಬೀದಿ ದೀಪಗಳನ್ನು ಅಳವಡಿಸಲು ಕೋರಲಾಗಿದೆ ಸಹಾಯಕ ಕಾರ್ಯಪಾಲಕ ಅಭಿಯಂತರರು (ವಿದ್ಯುತ್) ರವರು ಕೂಡಲೆ ಕ್ರಮವಹಿಸುವುದು.
6. ವಾರ್ಡಿನಲ್ಲಿ ಕಳ್ಳತನ ಹಾಗೂ ಚೈನ್ ಸ್ನ್ಯಾಚಿಂಗ್ ಹೆಚ್ಚಾಗುತ್ತಿದೆ-ಅರಕ್ಷಕ ವಿಭಾಗದವರು ಕೂಡಲೆ ಕ್ರಮವಹಿಸುವುದು.
7. ಜೋಗುಪಾಳ್ಯ ವಾರ್ಡಿನಲ್ಲಿ ಕಾವೇರಿ ನೀರು ಸಮರ್ಪಕವಾಗಿ ಬರುತ್ತಿಲ್ಲವಾಗಿ ಹಾಗೂ ವಾಲ್‌ಮೆನ್ ಸಹಾ ವಾರ್ಡಿನ ನಾಗರಿಕರ ಜೋತೆ ಸರಿಯಾಗಿ ನಡೆದುಕೊಳ್ಳುತ್ತಿಲ್ಲ. BWSSB ಕಾರ್ಯಪಾಲಕ ಅಭಿಯಂತರರು ಕೂಡಲೆ ಕ್ರಮ ವಹಿಸುವುದು
8. ವಾರ್ಡಿನಲ್ಲಿರುವ ಎಲ್ಲಾ ರಸ್ತೆಯ ಚರಂಡಿಗಳ ಹೂಳೆತ್ತಿ ಮಳೆ ಬಂದಾಗ ನೀರು ಸರಗವಾಗಿ ಹರಿಯುವಂತೆ ಮಾಡಬೇಕಾಗಿ ವಾರ್ಡಿನ ಸದ್ಯಸ್ಯರು ಸೂಚಿಸಿರುತ್ತಾರೆ. ಕಾರ್ಯಪಾಲಕ ಅಭಿಯಂತರರು ಬಿಬಿಎಂಪಿ ಕೂಡಲೆ ಕ್ರಮ ವಹಿಸುವುದು.

ಅಂತಿಮವಾಗಿ ಮೇಲ್ಕಂಡ ಎಲ್ಲಾ ವಿಷಯಗಳನ್ನು ಚರ್ಚಿಸಲಾಗಿ ಹಾಗೂ ಚರ್ಚಿಸಿದ ವಿಷಯಗಳ ಬಗ್ಗೆ ಅಧಿಕಾರಿಗಳು ಮುಂದಿನ ವಾರ್ಡ್ ಸಮಿತಿ ಸಭೆಗೆ ಸಂಬಂಧಪಟ್ಟ ಆಧಿಕಾರಿಗಳು ಕೈಗೊಂಡ ಕ್ರಮದ ವರದಿಯನ್ನು ನೀಡಲು ಸೂಚಿಸಿ, ಸಭೆಯನ್ನು ಮುಕ್ತಾಯಗೊಳಿಸಿದರು.

ನೋಡೆಲ್ ಅಧಿಕಾರಿಗಳು
ವಾರ್ಡ್ ಸಂಖ್ಯೆ-89- ಜೋಗುಪಾಳ್ಯ
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಪ್ರತಿಯನ್ನು:
1) ವಿಶೇಷ ಆಯುಕ್ತರು (ಆಡಳಿತ) ರವರ ಅವಗಾಹನೆಗಾಗಿ ಸಲ್ಲಿಸಿದೆ.
2) ಜಂಟಿ ಆಯುಕ್ತರು (ಪೂರ್ವ) ರವರ ಮಾಹಿತಿಗಾಗಿ ಕಳುಹಿಸಿಕೊಡಲಾಗಿದೆ.
3) ವಾರ್ಡ್ ಸಮಿತಿಯ ಅಧ್ಯಕ್ಷರ ಮಾಹಿತಿಗಾಗಿ ಕಳುಹಿಸಿದೆ.
4) ಮಾನ್ಯ ಕೌನ್ಸಿಲ್ ಕಾರ್ಯದರ್ಶಿಯವರಿಗೆ ಕಳುಹಿಸಿದೆ.
5) ವಾಡ್ ಸಮಿತಿಯ ಸದಸ್ಯರುಗಳ ಮಾಹಿತಿಗಾಗಿ ಕಳುಹಿಸಿದೆ.
6) ಕಛೇರಿ ಪ್ರತಿ.